☎: 080 - 22870060
🖷: 080- 22875798
email:dmekarnataka@yahoo.com

# ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ
# DIRECTORATE OF MEDICAL EDUCATION

ಆನಂದರಾವ್‌ವೃತ್ತ, ಬೆಂಗಳೂರು-560 009.
Ananda Rao Circle, BANGALORE-560 009.

ಸಂಖ್ಯೆ: ನಿವೈಶಿ/ಸಿಬ್ಬಂದಿ/142/2017-18 ದಿನಾಂಕ: 05.03.2018

## ಅಧಿಕೃತ ಜ್ಞಾಪನಾ ಪತ್ರ

ವಿಷಯ : ರಾಜ್ಯದ ಸ್ವಾಯತ್ತಾ ವೈದ್ಯಕೀಯ ಕಾಲೇಜುಗಳಲ್ಲಿ ಶುಶ್ರೂಷಾ ಸಿಬ್ಬಂದಿಗಳ ನೇಮಕಾತಿ ಬಗ್ಗೆ ಸರಿಯಾದ ಮಾಹಿತಿಯನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ : 1) ವೈಶಿನಿ/ಸಿಬ್ಬಂದಿ/142/2017-18 ದಿನಾಂಕ .02.2018.
2) ದಿನಾಂಕ 01.03.2018. ಆಯಾ ವೈದ್ಯಕೀಯ ಕಾಲೇಜುಗಳಿಂದ ಕಳುಹಿಸಲಾಗಿರುವ ಮಾಹಿತಿಯ ಮೇರೆಗೆ.

******

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ದಿನಾಂಕ 24.02.2018 ರಂದು ರಾಜ್ಯದ ಸರ್ಕಾರಿ ಸ್ವಾಯತ್ತಾ ವೈದ್ಯಕೀಯ ಕಾಲೇಜುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಶುಶ್ರೂಷಕ ಸಿಬ್ಬಂದಿಗಳನ್ನು ಆಯ್ಕೆ ಮಾಡಿ ಪಟ್ಟಿಗಳನ್ನು ನಿಮ್ಮ ನಿಮ್ಮ ಸಂಸ್ಥೆಗಳಿಗೆ ಕಳುಹಿಸಲಾಗಿರುತ್ತದೆ.

ಸದರಿ ಪಟ್ಟಿಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವ ಹಾಗೂ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇರುವವರ ಪಟ್ಟಿಗಳನ್ನು ಕಳುಹಿಸುವಂತೆ ಸೂಚಿಸಲಾಗಿತ್ತು. ಅದರಂತೆ, ನಿಮ್ಮ ನಿಮ್ಮ ವೈದ್ಯಕೀಯ ಕಾಲೇಜುಗಳಿಂದ ಕಳುಹಿಸಲಾದ ಮಾಹಿತಿಯ ಆಧಾರದ ಮೇರೆಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇರುವ ಸ್ಥಳಗಳಿಗೆ ದಿನಾಂಕ 03.03.2018ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕೌನ್ಸಿಲಿಂಗ್‌ನ್ನು ನಡೆಸಿ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆ ಪಟ್ಟಿಯನ್ನು ಕೆಇಎ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

ಸದರಿ ಅಭ್ಯರ್ಥಿಗಳು ನಿಮ್ಮ ಸಂಸ್ಥೆಗೆ ಕರ್ತವ್ಯಕ್ಕೆ ಹಾಜರಾಗಲು ಬಂದಾಗ ನೀವು ಕಳುಹಿಸಿರುವ ಮಾಹಿತಿಯನ್ನು ಆಧರಿಸಿ ಕರ್ತವ್ಯಕ್ಕೆ ತೆಗೆದುಕೊಳ್ಳಬೇಕಾಗುತ್ತದೆ ಎಂದು ತಿಳಿಸಲಾಗಿದೆ.

ವೈದ್ಯಕೀಯ ಶಿಕ್ಷಣ ನಿರ್ದೇಶಕರು.

ಇವರಿಗೆ :

1. ನೆಫ್ರೋ ಯುರಾಲಜಿ ಸಂಸ್ಥೆ, ವಿಕ್ಟೋರಿಯಾ ಆಸ್ಪತ್ರೆ ಆವರಣ, ಬೆಂಗಳೂರು
2. ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ, ಹುಬ್ಬಳ್ಳಿ
3. ಮಂಡ್ಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಂಡ್ಯ
4. ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ
5. ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್
6. ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ರಾಯಚೂರು
7. ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ.
8. ಕೊಡುಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ.
9. ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ.
10. ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಪ್ಪಳ.
11. ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ.
12. ಇಂದಿರಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಹೊಸೂರು ರಸ್ತೆ, ಬೆಂಗಳೂರು.
13. ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ
14. ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗುಲ್ಬರ್ಗಾ.

ಪ್ರತಿಯನ್ನು : ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಮಾಹಿತಿ ಹಾಗೂ ಅವಗಾಹನೆಗೆ ಸಲ್ಲಿಸಿದೆ.